ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.2899/2016/ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 28.3.2017

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ**

**ವಿಷಯ:** ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ ಕೊನ್ನಹಳ್ಳಿ ಗ್ರಾಮದ ದೂರುದಾರರಿಗೆ ಆಶ್ರಯ ಯೋಜನೆಯಡಿಯಲ್ಲಿ ಮನೆ ಕಟ್ಟಿಕೊಳ್ಳಲು ಅವರನ್ನು ಫಲಾನುಭವಿಯಾಗಿ ಗುರುತಿಸಿ ಅವರಿಗೆ ಕಾನೂನುಪ್ರಕಾರ ಲಭ್ಯವಿದ್ದ ಆರ್ಥಿಕ ಸಹಾಯವನ್ನು ಒದಗಿಸಿ ಕೊಡಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು **ಕೋರಿ.**

*******

ಶ್ರೀಮತಿ ಲಕ್ಷ್ಮಮ್ಮ, ಕೊನ್ನಹಳ್ಳಿ ಗ್ರಾಮ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ. ಹೊನ್ನೇಶಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಂಗಾಪುರ ಗ್ರಾಮಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ಮಧುಗಿರಿ ತಾಲ್ಲೂಕು ಕುನ್ನಹಳ್ಳಿ ಗ್ರಾಮದ ದೂರುದಾರರು ದೌರ್ಜನ್ಯಕ್ಕೊಳಗಾದ ಮಹಿಳೆಯಾಗಿದ್ದು, ಇವರಿಗೆ ವಾಸಿಸಲು ಯಾವುದೇ ಸ್ವಂತ ಮನೆ ಇರುವುದಿಲ್ಲ, ಆ ಕಾರಣದಿಂದ ಇವರನ್ನು ಗ್ರಾಮಸಭೆಯಲ್ಲಿ ಆಶ್ರಯ ಯೋಜನೆಯ ಫಲಾನುಭವಿಯಾಗಿ ಆಯ್ಕೆ ಮಾಡಿದ್ದು ಇರುತ್ತದೆ. ಆನಂತರ ಇವರ ಹೆಸರನ್ನು ಕೈಬಿಟ್ಟು ಬೇರೆಯವರ ಹೆಸರನ್ನು ಫಲಾನುಭವಿಯಾಗಿ ಸೇರಿಸಿ ಇವರನ್ನು ಅವಕಾಶವಂಚಿತರನ್ನಾಗಿ ಮಾಡಿರುತ್ತಾರೆ. ಎದುರುದಾರರಿಗೆ ಈ ಬಗ್ಗೆ ಕ್ರಮಕೈಗೊಳ್ಳಲು ಅರ್ಜಿ

ಸಲ್ಲಿಸಿದರೂ ಸಹಾ ಯಾವುದೇ ಕ್ರಮಕೈಗೊಂಡಿರುವುದಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ದೂರು ಸಲ್ಲಿಸಿದ್ದಾರೆ.

3. ಎದುರುದಾರರಿಗೆ ಈ ಕಛೇರಿಯಿಂದ ನೋಟೀಸು ಕಳುಹಿಸಿದಾಗ ಅದು ಎದುರುದಾರರಿಗೆ ಜಾರಿಯಾದ ಬಗ್ಗೆ ಸ್ವೀಕೃತಿ ಬಂದಿರುತ್ತದೆ. ಆದರೆ ಅವರು ತಮ್ಮ ಆಕ್ಷೇಪಣೆ ಸಲ್ಲಿಸಿರುವುದಿಲ್ಲ. ಆದ್ದರಿಂದ ಎದುರುದಾರರ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಲಾಗಿರುತ್ತದೆ.

4. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ದೂರುದಾರರು ದೌರ್ಜನ್ಯಕ್ಕೊಳಗಾದ ಮಹಿಳೆಯೆಂದು ದಿ.17.7.2013ರಂದು ನಡೆದ ಗ್ರಾಮಸಭೆಯಲ್ಲಿ ಈ ರೀತಿ ವಿಶೇಷ ವರ್ಗಕ್ಕೆ ಸೇರಿದ ವ್ಯಕ್ತಿಗಳಿಗೆ ರಂಗಾಪುರ ಪಂಚಾಯತಿಯಿಂದ ಆಶ್ರಯ ಯೋಜನೆಯಡಿ ಫಲಾನುಭವಿಯಾಗಿ ಆಯ್ಕೆಮಾಡಿದ ಪಟ್ಟಿ ಲಭ್ಯವಿರುತ್ತದೆ. ಈ ಪಟ್ಟಿಯಲ್ಲಿ ದೂರುದಾರರ ಹೆಸರು ಕ್ರಮ ಸಂಖ್ಯೆ 1 ರಲ್ಲಿ ನಮೂದಾಗಿದ್ದು, ಇವರ ಹೆಸರಿನಲ್ಲಿ ಪಡಿತರ ಚೀಟಿ, ಕುನ್ನಹಳ್ಳಿ ಗ್ರಾಮದ ವಾಸಸ್ಥಳ ದೃಢೀಕರಣ ಪತ್ರ, ಆದಾಯ ಮತ್ತು ಜಾತಿ ಪ್ರಮಾಣಪತ್ರ, ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಲಗತ್ತಿಸಿರುತ್ತಾರೆ. ಇವುಗಳನ್ನು ಪರಿಶೀಲಿಸಿದಾಗ ದೂರುದಾರರು ಕುನ್ನಹಳ್ಳಿ ಗ್ರಾಮದ ಕಾಯಂ ನಿವಾಸಿಯಾಗಿರುವುದರಿಂದ ಹಾಗೂ ದೌರ್ಜನ್ಯಕ್ಕೊಳಗಾದ ಮಹಿಳೆಯಾದ್ದರಿಂದ ಆಶ್ರಯ ಯೋಜನೆ ಫಲಾನುಭವಿಯಾಗಲು ಅರ್ಹರಾಗಿದ್ದಾರೆಂದು ಕಂಡುಬರುತ್ತದೆ.

5. ದಿ.15.9.2015ರಂದು ದೂರುದಾರರು ಎದುರುದಾರರಿಗೆ ಅರ್ಜಿ ಸಲ್ಲಿಸಿ ತನ್ನನ್ನು ಆಶ್ರಯ ಯೋಜನೆ ಫಲಾನುಭವಿಯಾಗಿ ಪರಿಗಣಿಸಬೇಕೆಂದು ಕೇಳಿಕೊಂಡಾಗ ಅದಕ್ಕೆ ಎದುರುದಾರರು ಯಾವುದೇ ರೀತಿ ಸ್ಪಂದನೆ ದೊರೆತಿಲ್ಲದಿರುವುದು ಕಂಡುಬರುತ್ತದೆ. ದೂರುದಾರರ ಹೆಸರಿನಲ್ಲಿ ಖಾಲಿ ನಿವೇಶನವಿದ್ದು, ಅದರಲ್ಲಿ ಮನೆಯನ್ನು ಕಟ್ಟಿಕೊಳ್ಳಲು ಅವರಿಗೆ ಆರ್ಥಿಕ ಸಹಾಯ ಬೇಕಾಗಿರುವುದು ಕಂಡುಬರುತ್ತದೆ.

6. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, **ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕು ಕುನ್ನಹಳ್ಳಿ ಗ್ರಾಮದ ದೂರುದಾರರಿಗೆ ಆಶ್ರಯ ಯೋಜನೆಯಡಿಯಲ್ಲಿ ಮನೆ ಕಟ್ಟಿಕೊಳ್ಳಲು ಅವರನ್ನು ಫಲಾನುಭವಿಯಾಗಿ ಗುರುತಿಸಿ ಅವರಿಗೆ ಕಾನೂನುಪ್ರಕಾರ ಲಭ್ಯವಿದ್ದ ಆರ್ಥಿಕ ಸಹಾಯವನ್ನು ಒದಗಿಸಿ ಕೊಡಲು ಸೂಕ್ತ**

ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

7. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

28/3/17.

[ ನ್ಯಾಯಮೂರ್ತಿ ಸುಭಾಷ್ ಬಿ ಆಡಿ]
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.

28/3